ಕರ್ನಾಟಕ ವಿಧಾನಸಭೆ

ಹದಿಮೂರನೇ ವಿಧಾನಸಭೆ

(ಹದಿನಾರನೇ ಅಧಿವೇಶನ)

ಕಾರ್ಯಕಲಾಪಗಳ ಪಟ್ಟಿ

ಸೋಮವಾರ, ದಿನಾಂಕ 11ನೇ ಫೆಬ್ರವರಿ, 2013

(ಸಮಯ: ಬೆಳಗ್ಗೆ 11.00 ಗಂಟೆಗೆ)

---

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಮೂರನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಮೂರನೇ ಪಟ್ಟಿ

2. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವ

"2013ರ ಫೆಬ್ರವರಿ 4ರಂದು ವಿಧಾನಮಂಡಲದ ಉಭಯ ಸದನಗಳ ಸದಸ್ಯರನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನಸಭೆಯ ಸದಸ್ಯರಾದ ನಾವು ಘನತೆವೆತ್ತ ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ"ಎಂದು ಶ್ರೀ ವೀರಣ್ಣ ಚರಂತಿಮಠ ಅವರು 2013ರ ಫೆಬ್ರವರಿ 5ರಂದು ಸೂಚಿಸಿದ ಪ್ರಸ್ತಾವದ ಮೇಲೆ ಮುಂದುವರೆದ ಚರ್ಚೆ ಹಾಗೂ ಸರ್ಕಾರದ ಉತ್ತರ.

3. ವಿತ್ತೀಯ ಕಾರ್ಯಕಲಾಪಗಳು

"2013-14ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲೆ ಸಾಮಾನ್ಯ ಚರ್ಚೆ"

4. ಗಮನ ಸೆಳೆಯುವ ಸೂಚನೆಗಳು

1. ಶ್ರೀ ಸಿದ್ಧರಾಮಯ್ಯ ಅವರು ರಾಜ್ಯದಲ್ಲಿ ಶಿಕ್ಷಣ ಯೋಜನೆಯು ಸಮರ್ಪಕವಾಗಿ ಜಾರಿಯಾಗದೇ ಇರುವುದರಿಂದ ಗ್ರಾಮೀಣ ಪ್ರದೇಶದಲ್ಲಿರುವ ವಿದ್ಯಾರ್ಥಿಗಳು ಕಂಪ್ಯೂಟರ್ ಶಿಕ್ಷಣದಿಂದ ವಂಚಿತರಾಗುತ್ತಿರುವ ಹಾಗೂ ಕಂಪ್ಯೂಟರ್ ಶಿಕ್ಷಕರಿಗೆ ನೀಡುತ್ತಿರುವ ಮಾಸಿಕ ವೇತನವನ್ನು ಹೆಚ್ಚಿಸುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರ ಗಮನ ಸೆಳೆಯುವುದು.

ಮು.ತಿ.ನೋ

2. ಶ್ರೀ ಹೆಚ್.ಕೆ. ಕುಮಾರ್‌ಸ್ವಾಮಿ ಅವರು ರಾಜ್ಯದಲ್ಲಿ ಅಡಿಗೆ ಅನಿಲ ಸಂಪರ್ಕ ಹೊಂದಿರುವ ಗ್ರಾಹಕರಿಗೂ ಸೀಮೆ ಎಣ್ಣೆ ವಿತರಿಸುವ ಬಗ್ಗೆ ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಸಚಿವರ ಗಮನ ಸೆಳೆಯುವುದು.

3. ಶ್ರೀ ಎನ್.ಸಂಪಂಗಿ ಅವರು ಬಾಗೇಪಲ್ಲಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯಿಂದ ರೈತರಿಗೆ ಭೂಸ್ವಾಧೀನಕ್ಕಾಗಿ ಪರಿಹಾರಧನ ನೀಡದಿರುವ ಬಗ್ಗೆ ಹಾಗೂ ಕೈಗಾರಿಕೆಯ ಪ್ಲಾಟ್‌ಗಳನ್ನು ಅಭಿವೃದ್ಧಿಪಡಿಸಿ ಹಂಚಿಕೆ ಮಾಡಿಲ್ಲದಿರುವ ಬಗ್ಗೆ ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರ ಗಮನ ಸೆಳೆಯುವುದು.

4. ಡಾ॥ ಸಾರ್ವಭೌಮ ಬಗಲಿ ಅವರು ಇಂಡಿ ನಗರದಲ್ಲಿ ಕಟ್ಟಲಾಗುತ್ತಿರುವ ಬಸ್‌ಸ್ಟ್ಯಾಂಡ್ ಕಟ್ಟಡ ನಿರ್ಮಾಣ ಕಾರ್ಯ ವಿಳಂಬವಾಗುತ್ತಿರುವ ಬಗ್ಗೆ ಮತ್ತು ಅಗ್ನಿಶಾಮಕ ದಳದ ಕಟ್ಟಡದ ಕಳೆಪೆ ಕಾಮಗಾರಿಯ ಬಗ್ಗೆ ಮಾನ್ಯ ಮಾನ್ಯ ಉಪ ಮುಖ್ಯಮಂತ್ರಿ (ಸಾರಿಗೆ ಮತ್ತು ಗೃಹ ಸಚಿವರ)ಯವರ ಗಮನ ಸೆಳೆಯುವುದು.

5. ಶ್ರೀ ಯು.ಟಿ.ಖಾದರ್ ಅವರು 2010ನೇ ಇಸವಿಯಲ್ಲಿ ನಡೆದ ಉಳ್ಳಾಲ್ ಸಯ್ಯದ್ ಮದನಿ ದರ್ಗಾ "ಉರುಸ್" ಸಮಾರಂಭಕ್ಕೆ ಸರ್ಕಾರದಿಂದ ಮಂಜೂರಾದ ಅನುದಾನದ ಬಾಕಿ ಹಣವನ್ನು ಬಿಡುಗಡೆ ಮಾಡುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

6. ಶ್ರೀ ವೆಂಕಟರಾವ್ ನಾಡಗೌಡ ಅವರು ಸಿಂಧನೂರು ನಗರದಲ್ಲಿನ ಚರಂಡಿ ನಿರ್ಮಾಣ ಹಾಗೂ ರಸ್ತೆ ಅಗಲೀಕರಣದ ಕಾಮಗಾರಿಗೆ ಮಂಜೂರಾದ ಅನುದಾನವನ್ನು ಬಿಡುಗಡೆ ಮಾಡದಿರುವ ಬಗ್ಗೆ ಮಾನ್ಯ ಪೌರಾಡಳಿತ ಸಚಿವರ ಗಮನ ಸೆಳೆಯವುದು.

7. ಶ್ರೀ ಟಿ.ಬಿ. ಜಯಚಂದ್ರ ಅವರು ರಾಜ್ಯದ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಅಭಿಯಾನ ಕಾರ್ಯಕ್ರಮದ ಅಡಿ ಕಾರ್ಯನಿರ್ವಹಿಸುತ್ತಿರುವ ಎನ್.ಆರ್.ಎಚ್.ಎಂ., ಆಯುಷ್ ವೈದ್ಯರುಗಳನ್ನು ಖಾಯಂಗೊಳಿಸುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯವುದು.

8. ಶ್ರೀ ಹೆಚ್.ಸಿ. ಬಾಲಕೃಷ್ಣ ಅವರು ಸರ್ಕಾರವು ಸಾರಾಯಿ ನಿಷೇಧ ಮಾಡಿದ್ದರಿಂದ ಸಾರಾಯಿ ಮಾರಾಟಗಾರರಿಗೆ ನೀಡಿದ್ದ ಸಾಲದ ಹಣವನ್ನು ಮನ್ನಾ ಮಾಡುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯವುದು.

9. ಡಾ॥ ಶರಣ ಪ್ರಕಾಶ್ ಆರ್. ಪಾಟೀಲ್ ಅವರು 2010-11ನೇ ಸಾಲಿನ ಆಯವ್ಯಯದಲ್ಲಿ ಪ್ರಸ್ತಾಪಿಸಿದಂತೆ ವಿದ್ಯಾರ್ಥಿಗಳು ಉನ್ನತ ವ್ಯಾಸಂಗಕ್ಕಾಗಿ ಬ್ಯಾಂಕಿನಿಂದ ಪಡೆದ ಶೈಕ್ಷಣಿಕ ಸಾಲದ ಮೇಲಿನ ಬಡ್ಡಿಯನ್ನು ಮನ್ನಾ ಮಾಡುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ ಸಚಿವರ ಗಮನ ಸೆಳೆಯವುದು.

10. ಶ್ರೀ ಹೆಚ್.ಕೆ. ಕುಮಾರಸ್ವಾಮಿ ಅವರು ಹಾಸನ ಜಿಲ್ಲೆ ಸಕಲೇಶಪುರ ತಾಲ್ಲೂಕು ಸೇರಿದಂತೆ ಕೊಡಗು ಚಿಕ್ಕಮಗಳೂರು, ಶಿವಮೊಗ್ಗ ಜಿಲ್ಲೆಗಳಲ್ಲಿ ಏಲಕ್ಕಿ ಬೆಳೆಗಳಿಗೆ ತಗಲಿರುವ ಕೊಕ್ಕೆ ಕಂದು ರೋಗದಿಂದ ಕೋಟ್ಯಾಂತರ ರೂ ಬೆಲೆ ಬೆಳೆ ನಾಶವಾಗಿದ್ದರಿಂದ ಸಾಲ ಮನ್ನಾ ಮಾಡುವ ಬಗ್ಗೆ ಮುಖ್ಯಮಂತ್ರಿಯವರ ಗಮನ ಸೆಳೆಯವುದು.

11. ಶ್ರೀ ಟಿ.ಬಿ. ಜಯಚಂದ್ರ ಅವರು ಇತ್ತೀಚಿಗೆ ರಾಜ್ಯದಲ್ಲಿ ಮಹಿಳೆಯರ ಮೇಲಿನ ಅತ್ಯಾಚಾರ ಪ್ರಕರಣಗಳು ಹೆಚ್ಚಾಗುತ್ತಿದ್ದು ಮಹಿಳೆಯರು ಅಭದ್ರತೆಯಿಂದ ಭಯಭೀತರಾಗಿರುವುದರಿಂದ ಈ ಕುರಿತು ತುರ್ತು ಕ್ರಮ ಕೈಗೊಳ್ಳುವ ಬಗ್ಗೆ ಮಾನ್ಯ ಉಪ ಮುಖ್ಯಮಂತ್ರಿ (ಸಾರಿಗೆ ಮತ್ತು ಗೃಹ ಸಚಿವರ)ಯವರ ಗಮನ ಸೆಳೆಯುವುದು.

12. ಶ್ರೀ ಸೈಯದ್ ಯಾಸೀನ್ ಅವರು ಜಿಲ್ಲಾ ಆಡಳಿತ ಭವನದ (ಜಿಲ್ಲಾ ಕಛೇರಿ ಸಂಕೀರ್ಣ)ನಿರ್ಮಾಣಕ್ಕಾಗಿ ಅಗತ್ಯವಾಗಿರುವ ಭೂ ಹಂಚಿಕೆ ಮಾಡುವ ಬಗ್ಗೆ ಮಾನ್ಯ ಉಪ ಮುಖ್ಯಮಂತ್ರಿ (ಕಂದಾಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್)ಯವರ ಗಮನ ಸೆಳೆಯುವುದು.

13. ಶ್ರೀ ಪ್ರಕಾಶ್ ಬಾಬಣ್ಣ ಹುಕ್ಕೇರಿ ಅವರು ಬೆಳಗಾವಿ ಜಿಲ್ಲೆ ಚಿಕ್ಕೋಡಿ ದೂಧಗಂಗಾ ಕೃಷ್ಣಾ ಸಹಕಾರಿ ಸಕ್ಕರೆ ಕಾರ್ಖಾನೆಯಿಂದ ಕೃಷಿ ಅಭಿವೃದ್ಧಿ ಯೋಜನೆಯಡಿ ನೀಡಲಾಗಿದ್ದ ಸಾಲವನ್ನು ಕೇಂದ್ರ ಸರ್ಕಾರ ವಿಧರ್ಭ ಪ್ಯಾಕೇಜ್ ಘೋಷಣೆ ಮಾಡಿ ಮನ್ನಾ ಮಾಡಿದ್ದು, ಸಾಲ ಪಡೆದ ರೈತರುಗಳಿಗೆ ಬ್ಯಾಂಕುಗಳು ಯಾವುದೇ ತರಹದ ಲೆಕ್ಕ ಪತ್ರಗಳನ್ನು ತೋರಿಸದೇ ಅವ್ಯವಹಾರವಾಗಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯವುದು.

5. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1. ಶ್ರೀಯುತರುಗಳಾದ ಶ್ರೀಕಾಂತ ಕುಲಕರ್ಣಿ, ಡಾ॥ ಸಾರ್ವಭೌಮ ಬಗಲಿ ಮತ್ತು ಶಿವರಾಜ್ ಎಸ್. ತಂಗಡಗಿ ಇವರುಗಳು ಮಹಾರಾಷ್ಟ್ರ ರಾಜ್ಯದಿಂದ ಕೃಷ್ಣ ಹಾಗೂ ಭೀಮಾ ನದಿಗಳಿಗೆ ನೀರನ್ನು ಬಿಡಿಸುವ ಕುರಿತು ನೀಡಿರುವ ಸೂಚನೆಯ ಬಗ್ಗೆ ಚರ್ಚೆ.

2. ಶ್ರೀಯುತರುಗಳಾದ ಡಾ॥ ಸೌರ್ವಭೌಮ ಬಗಲಿ, ಎನ್. ಸಂಪಂಗಿ, ಶಿವರಾಜ್ ತಂಗಡಗಿ, ಗೂಳಿಹಟ್ಟಿ ಶೇಖರ್ ಹಾಗೂ ಇತರರು ರಾಜ್ಯದ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಹಿಂದುಳಿದ ವರ್ಗಗಳ ವಸತಿ ನಿಲಯಗಳಲ್ಲಿ ಮೂಲಭೂತ ಸೌಕರ್ಯ ಕೊರತೆ ಮತ್ತು ಅಪೌಷ್ಟಿಕ ಆಹಾರ ಪೂರೈಕೆ ವಿಚಾರದಲ್ಲಿ ನೀಡಿರುವ ಸೂಚನೆಯ ಬಗ್ಗೆ ಚರ್ಚೆ.

6. ಅರ್ಧ ಗಂಟೆ ಕಾಲಾವಧಿ ಚರ್ಚೆ

ಶ್ರೀ ನರೇಂದ್ರಸ್ವಾಮಿ ಪಿ.ಎಂ, ಅವರು "ನಿರಂತರ ವಿದ್ಯುತ್ ಸರಬರಾಜು" ಮಾಡುವ ಬಗ್ಗೆ ದಿನಾಂಕ:07.02.2013ರಂದು ಸದನದಲ್ಲಿ ಉತ್ತರಿಸುವ ಪ್ರಶ್ನೆಗಳ 2ನೇ ಪಟ್ಟಿಯಲ್ಲಿನ ಪ್ರಶ್ನೆ ಸಂಖ್ಯೆ 28(172)ಕ್ಕೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

ಪಿ.ಓಂಪ್ರಕಾಶ
ಕಾರ್ಯದರ್ಶಿ

Raj N

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
(www.kar.nic.in/kla)